# ಕರ್ನಾಟಕ ಸರ್ಕಾರ

## ಕಂದಾಯ ಇಲಾಖೆ

## ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ

---

ವಿಷಯ:- ಕರೋನಾ ವೈರಸ್ ಹರಡದಂತೆ ಸಾರ್ವಜನಿಕರ ಆರೋಗ್ಯ ಕಾಪಾಡುವ ಹಿತದೃಷ್ಠಿಯಿಂದ ಚಿತ್ರದುರ್ಗ ಜಿಲ್ಲೆಯಾದ್ಯಂತ ಸಿ.ಆರ್.ಪಿ.ಸಿ 1973 ಕಲಂ 144 ರಡಿಯಲ್ಲಿ ವಿಧಿಸಲಾಗಿರುವ ರಾತ್ರಿ ಕರ್ಫ್ಯೂ ಅವಧಿಯನ್ನು ಪರಿಷ್ಕರಿಸುವ ಬಗ್ಗೆ ಹಾಗೂ ದಿ:05-07-2020 ರಿಂದ ದಿ:02-08-2020 ರವರೆಗಿನ ನಾಲ್ಕು ಭಾನುವಾರಗಳಂದು ಪೂರ್ಣ ಲಾಕ್‌ಡೌನ್ ವಿಧಿಸುವ ಬಗ್ಗೆ.

ಉಲ್ಲೇಖ:- ಮುಖ್ಯ ಕಾರ್ಯದರ್ಶಿಗಳು ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು ರವರ ಆದೇಶ ಸಂಖ್ಯೆ:ಕಂಇ 158 ಟಿ.ಎನ್.ಆರ್ 2020 ದಿ:30-05-2020 ಮತ್ತು 28-06-2020.

$$$$$$$$

**ಪ್ರಸ್ತಾವನೆ:**

ಕೋವಿಡ್ ಪ್ರಕರಣಗಳು ಉಲ್ಬಣಗೊಳ್ಳುತ್ತಿರುವ ಹಿನ್ನಲೆಯಲ್ಲಿ ಸೋಂಕನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ನಿಟ್ಟಿನಲ್ಲಿ ಉಲ್ಲೇಖಿದ ದಿ:30-05-2020 ರ ಹಳೆ ಮಾರ್ಗಸೂಚಿಗಳಿಗೆ ಉಲ್ಲೇಖಿತ ದಿ:28-06-2020 ರಂದು ಹೊರಡಿಸಲಾಗಿರುವ ಸೇರ್ಪಡೆಗಳನ್ನು ಹಾಗೂ ತಿದ್ದುಪಡಿಗಳನ್ನು ಸೇರಿಸಿ ಪ್ರತಿದಿನ ರಾತ್ರಿ 8-00 ರಿಂದ ಬೆಳಗ್ಗೆ 5-00 ರವರೆಗೆ ಕರ್ಫ್ಯೂ ಅನ್ನು ಮುಂದುವರೆಸಿ ಹಾಗೂ ದಿ:05-07-2020 ರಿಂದ 02-08-2020 ರವರೆಗೆ 4 ಭಾನುವಾರಗಳಂದು ಸಂಪೂರ್ಣ ಲಾಕ್‌ಡೌನ್ ವಿಧಿಸಿ ಆದೇಶಿಸಲಾಗಿರುತ್ತದೆ.

ಪ್ರಯುಕ್ತ ಈ ಕೆಳಕಂಡಂತೆ ಆದೇಶಿಸಿದೆ.

**:ಆದೇಶ:**

**ಸಂಖ್ಯೆಎಂ.ಎ.ಜೆ(3) ಸಿಆರ್- 144/2019-20** **ದಿನಾಂಕ:29-06-2020.**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನಲೆಯಲ್ಲಿ ಆರ್.ವಿನೋತ್ ಪ್ರಿಯಾ, ಭಾ.ಆ.ಸೇ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ಚಿತ್ರದುರ್ಗ ಜಿಲ್ಲೆ ಆದ ನಾನು ವಿಪತ್ತು ನಿರ್ವಹಣಾ ಕಾಯ್ದೆ-2005 ರ ಕಲಂ 30 ರಡಿಯಲ್ಲಿ ಹಾಗೂ ಸಿ.ಆರ್.ಪಿ.ಸಿ ಕಲಂ 144 ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡಂತೆ ಆದೇಶಿಸಿರುತ್ತೇನೆ.

1) ದಿನಾಂಕ:05-07-2020 ರ ಭಾನುವಾರದಿಂದ ಮುಂದಿನ ನಾಲ್ಕು ಭಾನುವಾರಗಳು ಅಂದರೆ ದಿನಾಂಕ:02-08-2020 ರವರೆಗಿನ ಎಲ್ಲಾ ಭಾನುವಾರಗಳಂದು ಪೂರ್ಣ ದಿನದ ಲಾಕ್‌ಡೌನ್ ಇರತಕ್ಕದ್ದು ಆದರೆ ಅಗತ್ಯ ಸರಕು ಸರಂಜಾಮುಗಳ ಸಾಗಾಣಿಕೆಗೆ ಯಾವುದೇ ನಿರ್ಬಂಧವಿರುವುದಿಲ್ಲ.
2) ಚಿತ್ರದುರ್ಗ ಜಿಲ್ಲೆಯಾದ್ಯಂತ ದಿ:29-06-2020 ರಿಂದ ಮುಂದಿನ ಆದೇಶದವರೆಗೆ ರಾತ್ರಿ 8-00 ರಿಂದ ಬೆಳಗ್ಗೆ 5-00 ಗಂಟೆಯವರೆಗೆ ರಾತ್ರಿ ಕರ್ಫ್ಯೂ ಜಾರಿಯಲ್ಲಿರುತ್ತದೆ. ಈ ಕರ್ಫ್ಯೂ ಅವಧಿಯಲ್ಲಿ ಅತ್ಯಗತ್ಯ ಚಟುವಟಿಕೆಗಳನ್ನು ಹೊರತುಪಡಿಸಿ ಉಳಿದಂತೆ ಅವಶ್ಯಕವಲ್ಲದ ಚಟುವಟಿಕೆಗಳ ವ್ಯಕ್ತಿಗಳ ಸಂಚಾರವನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ.

ಸದರಿ ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ಭಾರತೀಯ ದಂಡ ಸಂಹಿತೆಯ ಕಲಂ 188 ಮತ್ತು ವಿಪತ್ತು ನಿರ್ವಹಣಾ ಕಾಯ್ದೆಯಡಿ ಕ್ರಮ ಜರುಗಿಸಲಾಗುವುದು.

(ಆರ್.ವಿನೋತ್ ಪ್ರಿಯಾ)
ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

**ಪ್ರತಿಯನ್ನು ಈ ಕೆಳಕಂಡವರಿಗೆ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ :-**

1) ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಮತ್ತು ಸಾರಿಗೆ ಇಲಾಖೆ, ವಿಧಾನಸೌಧ, ಬೆಂಗಳೂರು ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಕರ್ನಾಟಕ ಸರ್ಕಾರ ಆನಂದ ರಾವ್ ವೃತ್ತ ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3) ಮಾನ್ಯ ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗ ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4) ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
5) ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ ಉಪವಿಭಾಗ ರವರಿಗೆ ಮಾಹಿತಿಗಾಗಿ.
6) ಜಿಲ್ಲೆಯ ಎಲ್ಲಾ ತಾಲ್ಲೂಕು ದಂಡಾಧಿಕಾರಿಗಳಿಗೆ.
7) ವಾರ್ತಾ ಮತ್ತು ಪ್ರಚಾರಾಧಿಕಾರಿಗಳು, ಚಿತ್ರದುರ್ಗ ಇವರಿಗೆ ರವಾನಿಸುತ್ತಾ ಮೇಲ್ಕಂಡ ಆದೇಶವನ್ನು ಜಿಲ್ಲೆಯಲ್ಲಿನ ಎಲ್ಲಾ ಸ್ಥಳೀಯ ದಿನಪತ್ರಿಕೆಗಳಲ್ಲಿ ಸರ್ಕಾರಕ್ಕೆ ಯಾವುದೇ ವೆಚ್ಚ ಬಾರದಂತೆ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.

Scanned by CamScanner